ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಹಿರಿಯ ನಾಗರಿಕರು, ಮಕ್ಕಳ ಮತ್ತು ಮಹಿಳೆಯರ ಸ್ಥಿತಿಗತಿಗಳ ಬಗ್ಗೆ

ಶ್ರೀ ಕೆ. ಗೋವಿಂದರಾಜ್(ವಿಧಾನಸಭೆಯಿಂದ ಚುನಾಯಿತರಾದವರು) -

491 (503) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಿರಿಯ ನಾಗರಿಕರು, ಮಕ್ಕಳು ಮತ್ತು ಮಹಿಳೆಯರ ಸ್ಥಿತಿಗತಿಯ ಸಮಾಜದ ಆರೋಗ್ಯವನ್ನು ಸೂಚಿಸುವ ಮಾನದಂಡಗಳ- ಲ್ಲೊಂದಾಗಿದ್ದು, ವೃದ್ಧರನ್ನು ಕೆಟ್ಟದಾಗಿ ನಡೆಸಿಕೊಳ್ಳುತ್ತಿರುವ ರಾಜ್ಯಗಳ ಪಟ್ಟಿಯಲ್ಲಿ ದೇಶದಲ್ಲಿಯೇ ನಮ್ಮ ರಾಜ್ಯ ಎರಡನೇ ಸ್ಥಾನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹಿರಿಯ ನಾಗರಿಕರ ಹಿತಾಸಕ್ತಿ ರಕ್ಷಣೆಗೆ ಅಗತ್ಯವಾದ ಯಾವ ಯಾವ ಕಾರ್ಯತಂತ್ರ ಹಾಗೂ ಯೋಜನೆಗಳನ್ನು ಸರ್ಕಾರ ರೂಪಿಸಿದೆ? (ವಿವರಗಳನ್ನು ನೀಡುವುದು)